ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ, ನ್ಯಾಕ್‌ನಿಂದ B+ (CGPA: 2.74) ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440 ಚಾಮರಾಜನಗರ ಜಿಲ್ಲೆ**

☎: 08224-252149 🖷: 08224-256051 jsscwk@gmail.com www. jsscwkgl.org

ಕೊಳ್ಳೇಗಾಲ 7.5.2025 ರಂದು ಚಾಮರಾಜನಗರ ವಿಶ್ವವಿದ್ಯಾನಿಲಯವು ಮೊಟ್ಟ ಮೊದಲಬಾರಿಗೆ ಪುರುಷರ ಮತ್ತು ಮಹಿಳೆಯರ ಅಂತರ ಕಾಲೇಜುಗಳ ಕ್ರೀಡಾಕೂಟವನ್ನು ಜೆಎಸ್‌ಎಸ್ ಮಹಿಳಾ ಕಾಲೇಜು ಚಾಮರಾಜನಗರದಲ್ಲಿ ಆಯೋಜಿಸಲಾಗಿತ್ತು. ಈ ಕ್ರೀಡಾಕೂಟದಲ್ಲಿ ನಮ್ಮ ಕಾಲೇಜಿನ ಕ್ರೀಡಾಪಟುಗಳು ಭಾಗವಹಿಸಿ ಬಾಲ್‌ಬ್ಯಾಡ್ಮಿಂಟನ್, ವಾಲಿಬಾಲ್, ಕಬ್ಬಡಿಯಲ್ಲಿ ಪ್ರಥಮ, ಥ್ರೋಬಾಲ್‌ನಲ್ಲಿ ತೃತೀಯ ಸ್ಥಾನವನ್ನು ಪಡೆದಿರುತ್ತಾರೆ. ಇವರಿಗೆ ಪ್ರಾಂಶುಪಾಲರು ದೈಹಿಕ ಶಿಕ್ಷಣ ನಿರ್ದೇಶಕರು ಆಡಳಿತ ಅಧಿಕಾರಿಗಳು ಶುಭಕೋರಿದರು.



## ಜೆಎಸ್‌ಎಸ್ ಮಹಿಳಾ ಕಾಲೇಜು ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆಗಳಲ್ಲಿ ಬಹುಮಾನ

# ಅಂತರ ಕಾಲೇಜುಗಳ ಕ್ರೀಡಾಕೂಟದಲ್ಲಿ ಸಾಧನೆ

■ ವಿಜಯವಾಣಿ ಸುದ್ದಿಜಾಲ ಕೊಳ್ಳೇಗಾಲ

ಚಾಮರಾಜನಗರದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಇತ್ತೀಚೆಗೆ ಆಯೋಜಿಸಿದ್ದ ಪುರುಷ ಮತ್ತು ಮಹಿಳೆಯರ ಅಂತರ ಕಾಲೇಜುಗಳ ಕ್ರೀಡಾಕೂಟದಲ್ಲಿ ಸಾಧನೆಗೈದ ಪಟ್ಟ ಣದ ಜೆಎಸ್ ಎಸ್ ಮಹಿಳಾ ಕಾಲೇಜಿನ ವಿದ್ಯಾರ್ಥಿ ಗಳನ್ನು ಪ್ರಾಂಶುಪಾಲರು, ಕಾಲೇಜು ಸಿಬ್ಬಂದಿ ಅಭಿನಂದಿಸಿದರು.

ಮಹಿಳಾ ಕಾಲೇಜು ಪ್ರಾಂಶುಪಾಲ ಕೊಂಗಳಪ್ಪ ಮಾತನಾಡಿ, ಮೊದಲ ಬಾರಿಗೆ ಚಾಮರಾಜನಗರ ವಿಶ್ವವಿ ದ್ಯಾಲಯ ಆಯೋಜಿಸಿದ್ದ ಅಂತರ ಜಿಲ್ಲಾ ಕ್ರೀಡಾಕೂಟದಲ್ಲಿ ಕಾಲೇಜಿನ ವಿದ್ಯಾರ್ಥಿನಿಯರು ಸಾಧನೆ ಮಾಡಿರುವುದು ಖುಷಿಯ ವಿಚಾರ. ವಾಲಿಬಾಲ್ ಮತ್ತು ಕಬಡ್ಡಿಯಲ್ಲಿ ಪ್ರಥಮ, ಥ್ರೋಬಾಲ್‌ನಲ್ಲಿ ತೃತೀಯ ಸ್ಥಾನವನ್ನು ವಿದ್ಯಾರ್ಥಿ ನಿಯರು ಪಡೆದಿದ್ದಾರೆ. ಕ್ರೀಡೆ ದೈಹಿಕ ಮತ್ತು ಮಾನಸಿಕ ಸದೃಢತೆಗೆ ಸಹಕಾರಿ. ಹಾಗಾಗಿ ಮಕ್ಕಳು ಶೈಕ್ಷಣಿಕ ಚಟುವ ಟಿಕೆ ಜತೆಗೆ ಕ್ರೀಡೆಗೂ ಆದ್ಯತೆ ನೀಡಬೇಕೆಂದು ಕಿವಿಮಾತು ಹೇಳಿದರು.

ವಾಲಿಬಾಲ್ ಕ್ರೀಡೆಯಲ್ಲಿ ವಿದ್ಯಾರ್ಥಿನಿಯರಾದ ಪ್ರಿಯದರ್ಶಿನಿ, ಕುಲ್ಸುಮ್, ಮಧು, ಸಿಂಚನಾ, ಭವಾನಿ, ಬಿಂದು, ಸ್ಪಂದನಾ, ಕೀರ್ತಿ, ಲಲಿತಾ ಪ್ರಥಮ ಬಹುಮಾನ ಪಡೆದಿದ್ದಾರೆ. ಕಬಡ್ಡಿ ಕ್ರೀಡೆ ಯಲ್ಲಿ ಎಂ.ಕೆ.ಪೂಜಾ, ಹರ್ಷಿತಾ, ರೂಪಾ, ಪೂಜಾ, ಭವಾನಿ, ಸಿಂಚನಾ, ಪ್ರಿಯದರ್ಶಿನಿ, ಮಧು, ಸೌಜನ್ಯಾ, ಮೋನಿಕಾ, ಮಾನಸಾ, ಬೇಬಿ ಪ್ರಥಮ ಬಹುಮಾನ ಪಡೆದಿದ್ದಾರೆ. ಬಾಲ್ ಬಾಡ್ಮಿಂಟನ್ ಕ್ರೀಡೆ ಯಲ್ಲಿ ಟಿ.ಎಸ್.ಸಿಂಚನಾ, ರೀತು ನಾಯಕ್, ಅಮೃತಾ, ದಿವ್ಯಾ, ಮಹದೇವಿ, ಮಂಗಳಮ್ಮ, ಅನು, ಹರ್ಷಿತಾ, ಕೀರ್ತಿ, ಪೂಜಾ ತೃತೀಯ ಬಹುಮಾನ ಪಡೆದಿದ್ದಾರೆ. ಕನ್ನಡ ಪ್ರಾಧ್ಯಾಪಕ ನಾಗಭೂಷಣ್, ಆಡಳಿತಾಧಿಕಾರಿ ಗಿರೀಶ್, ದೈಹಿಕ ಶಿಕ್ಷಣ ನಿರ್ದೇಶಕ ಶ್ರೀಧರ್ ಇತರರಿದ್ದರು.



ಚಾಮರಾಜನಗರ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಆಯೋಜಿಸಿದ್ದ ಅಂತರ ಕಾಲೇಜುಗಳ ಕ್ರೀಡಾಕೂಟದಲ್ಲಿ ಸಾಧನೆಗೈದ ಕೊಳ್ಳೇಗಾಲದ ಜೆಎಸ್ ಎಸ್ ಮಹಿಳಾ ಕಾಲೇಜಿನ ವಿದ್ಯಾರ್ಥಿಗಳನ್ನು ಪ್ರಾಂಶುಪಾಲ ಕೊಂಗಳಪ್ಪ ಅಭಿನಂದಿಸಿದರು. ನಾಗಭೂಷಣ್, ಗಿರೀಶ್, ಶ್ರೀಧರ್ ಇದ್ದರು.

Vijayavani 15.05.2025